# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 789 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತರಿಸಬೇಕಾದ ದಿನಾಂಕ | : | 20/09/2022 |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಪೋಷನ್ ಅಭಿಯಾನದ ಅಡಿಯಲ್ಲಿ ರಾಜ್ಯದಲ್ಲಿರುವ ಅಂಗನವಾಡಿ ಕಾರ್ಯಕರ್ತೆಯರಿಗೆ ಕೆಲಸದ ಒತ್ತಡವನ್ನು ಕಡಿಮೆಗೊಳಿಸುವ ಸಲುವಾಗಿ ಮತ್ತು ಪಾರದರ್ಶಕ ವ್ಯವಸ್ಥೆಗಾಗಿ ನೀಡಿದ್ದ ಸ್ಮಾರ್ಟ್ ಪೋನಿಗೆ ಅಳವಡಿಸಿದ್ದ ಸಿಮ್‌ಗಳಿಗೆ ರೀಚಾರ್ಜ್ ಮಾಡದೇ ಇದ್ದು, ಇಲಾಖೆಯ ಅಂಕಿ-ಅಂಶ ದಾಖಲಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ. | ಸುಮಾರು 10ಲಕ್ಷಕ್ಕೂ ಹೆಚ್ಚಿನ ಗರ್ಭಿಣಿಯರು ಮತ್ತು 40 ಲಕ್ಷಕ್ಕೂ ಹೆಚ್ಚಿನ ಮಕ್ಕಳ ಆರೋಗ್ಯದ ಕುರಿತ ಸಮಗ್ರ ಮಾಹಿತಿಯನ್ನು ಕಳೆದ 3-4 ತಿಂಗಳಿಂದ ಸಂಗ್ರಹಿಸಿ, ಅದನ್ನು ಇಲಾಖೆಯ ಸರ್ವರ್‌ಗೆ ಅಪ್‌ಲೋಡ್ ಮಾಡದಿರುವುದರಿಂದ ಅಪೌಷ್ಟಿಕ ಮಕ್ಕಳ ಮತ್ತು 6 ತಿಂಗಳುಗಳಿಂದ 6 ವರ್ಷಗಳವರೆಗೆ ಮಗುವಿನ ಆರೋಗ್ಯದ ಸ್ಥಿತಿಯನ್ನು ಮತ್ತು ಗರ್ಭಿಣಿಯರ ಆರೋಗ್ಯದ ಕಡೆ ಹೆಚ್ಚಿನ ಗಮನ ನೀಡಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br><br>ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳು / ಗರ್ಭಿಣಿ / ಬಾಣಂತಿಯರ ಮಾಹಿತಿಯನ್ನು ಕೇಂದ್ರ ಸರ್ಕಾರ ನಿಗಧಿಪಡಿಸಿರುವ ವಹಿಯಲ್ಲಿ ಪ್ರತಿ ಮಾಹೆ ನಿರ್ವಹಣೆ ಮಾಡಲಾಗುತ್ತಿದೆ. ಸಿಮ್‌ಗಳಿಗೆ ರೀಚಾರ್ಜ್ ಮಾಡದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ "ಪೋಷಣ್ ಟ್ರಾಕರ್"" ತಂತ್ರಾಂಶದಲ್ಲಿ ಮಾಹಿತಿಯನ್ನು ದಾಖಲಿಸಲು ಸಾಧ್ಯವಾಗಿರುವುದಿಲ್ಲ. |
| ಇ. | ಯಾವ ಕಾರಣಕ್ಕಾಗಿ ರೀಚಾರ್ಜ್‌ನ್ನು ಸ್ಥಗಿತಗೊಳಿಸಲಾಗಿತ್ತು; ಇಷ್ಟು ಕಡಿಮೆ ಮೊತ್ತದ ಹಣವನ್ನು ಖರ್ಚು ಮಾಡಲು ಸಾಧ್ಯವಾಗದ ಪರಿಸ್ಥಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ? (ಸಂಪೂರ್ಣ ವಿವರವನ್ನು ನೀಡುವುದು) | ಪೋಷಣ್ ಅಭಿಯಾನ್ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಈ ಯೋಜನೆಯಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 60:40ರ ಅನುಪಾತದಲ್ಲಿ ವೆಚ್ಚ ಭರಿಸುತ್ತಿವೆ. ಕೇಂದ್ರ ಸರ್ಕಾರವು 2020-21ನೇ ಸಾಲಿನಲ್ಲಿ ಪೋಷಣ್ ಅಭಿಯಾನ್ ಯೋಜನೆಗೆ ಅನುದಾನ ಬಿಡುಗಡೆ ಮಾಡದಿರುವುದರಿಂದ ಸಿಮ್‌ಗಳಿಗೆ ರೀಚಾರ್ಜ್ ಮಾಡಲು ಸಾಧ್ಯವಾಗಿರುವುದಿಲ್ಲ.<br><br>ಸಿಮ್ ಸೇವೆಗಳನ್ನು ಒದಗಿಸುತ್ತಿರುವ Airtel, BSNL, & Vodafone ಸೇವಾ ವಿತರಕ ಸಂಸ್ಥೆಗಳಿಗೆ ಪ್ರಸ್ತುತ ಹಣವನ್ನು ಪಾವತಿಸಲಾಗಿದೆ. |

**ಸಂಖ್ಯೆ:ಮಮಇ 304 ಐಸಿಡಿ 2022**

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು